RNU AIR DHARWAD

JUNE 04, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕಳೆದ 24 ಗಂಟೆಗಳಲ್ಲಿ, ರಾಜ್ಯಾದ್ಯಂತ 53 ಜನರಿಗೆ, ಕೋವಿಡ್ ದೃಢಪಟ್ಟಿದೆ.** ಸೋಂಕಿತರ ಸಂಖ್ಯೆ 582ಕ್ಕೆ ಏರಿಕೆಯಾಗಿದೆ ಎಂದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಿಳಿಸಿದೆ. ರಾಜ್ಯದಲ್ಲಿ ಒಟ್ಟು 324 ಸಕ್ರಿಯ ಕೋವಿಡ್ ಪ್ರಕರಣಗಳಿದ್ದು, 319 ಜನ ಮನೆ ಆರೈಕೆಯಲ್ಲಿದ್ದಾರೆ. 5 ಜನ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸಾರ್ವಜನಿಕರು ಮುಂಜಾಗ್ರತೆ ವಹಿಸುವಂತೆ, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೋರಿದೆ.

<><><>

**ಕೇಂದ್ರ ಸರ್ಕಾರದ ಅಧೀನದ, ರಾಷ್ಟ್ರೀಯ ಶಾಖೋತ್ಪನ್ನ** ವಿದ್ಯುತ್ ನಿಗಮ, ಎನ್.ಟಿ.ಪಿ.ಸಿ, ವಿಜಯಪುರ ಜಿಲ್ಲೆ ಕೂಡಗಿಯಲ್ಲಿ ಬಾಲಕಿಯರ ಸಬಲೀಕರಣ ಉದ್ದೇಶದಿಂದ, ಸಿ.ಎಸ್.ಆರ್– ಕಂಪನಿಯ ಸಮಾಜಿಕ ಜವಾಬ್ದಾರಿ ನಿಧಿ ಅಡಿ, 'ಗರ್ಲ್ ಎಂಪರಮೆಂಟ್ ಮಿಶನ್–ಜೆಮ್' ಯೋಜನೆ ಆರಂಭಿಸಿದೆ. ಶಾಖೋತ್ಪನ್ನ ವಿದ್ಯುತ್ ಯೋಜನೆಯಿಂದ ಬಾಧಿತವಾದ ಕೂಡಗಿ, ಮಸೂತಿ, ಗೊಣಸಂಗಿ, ತೆಲಗಿ ಹಾಗೂ ಮುತ್ತಗಿ ಗ್ರಾಮಗಳ, ಒಟ್ಟು 80 ವಿದ್ಯಾರ್ಥಿಯರಿಗೆ ಆಯೋಜಿಸಲಾಗಿರುವ, ತರಬೇತಿ ಹಾಗೂ ವ್ಯಕ್ತಿತ್ವ ವಿಕಸನ ಕಾರ್ಯಕ್ರಮದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಎನ್.ಟಿ.ಪಿ.ಸಿ, ಕೂಡಗಿ ಉಪ ಪ್ರಧಾನ ವ್ಯವಸ್ಥಾಪಕರಾದ ಅಣ್ಣಪ್ಪ ಜಗನ್ನಾಥ ದೇವಮಾನೆ ..

<><><>

**ಕಲ್ಯಾಣ ಕರ್ನಾಟಕ ಭಾಗದಲ್ಲಿ,** ಹೊಸದಾಗಿ ರಚನೆಯಾಗಿರುವ 18 ತಾಲೂಕುಗಳಲ್ಲಿ, 16 ಕಡೆ 137 ಕೋಟಿ ರೂಪಾಯಿ ವೆಚ್ಚದಲ್ಲಿ, ಪ್ರಜಾಸೌಧಗಳು ನಿರ್ಮಾಣವಾಗಲಿವೆ. 9 ನೇ ತಾರೀಖಿನಂದು ರಾಯಚೂರಿನಲ್ಲಿ ನಡೆಯುವ ಕಾರ್ಯಕ್ರಮದಲ್ಲಿ, ಪ್ರಜಾಸೌಧ ಕಟ್ಟಡ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಡಾಕ್ಟರ ಅಜಯ ಧರಂ ಸಿಂಗ್ ಹೇಳಿದರು. ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, 19 ರಂದು ಯಾದಗಿರಿಯಲ್ಲಿ 400 ಕೋಟಿ ರೂಪಾಯಿ ವೆಚ್ಚದ ಆರೋಗ್ಯ ಆವಿಷ್ಕಾರ' ಯೋಜನೆಗೆ ಮುಖ್ಯಮಂತ್ರಿ ಅವರು ಚಾಲನೆ ನೀಡಲಿದ್ದಾರೆ ಎಂದರು.

<><><>

**ಧಾರವಾಡ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ,** ಇತ್ತೀಚೆಗೆ ಅಗಲಿದ ಹಿರಿಯ ಸಾಹಿತಿಗಳಾದ ಡಾಕ್ಟರ ಎಚ್.ಎಸ್ ವೆಂಕಟೇಶ ಮೂರ್ತಿ, ಪ್ರೊಫೆಸರ್ ಜಿ.ಎಸ್ ಸಿದ್ದಲಿಂಗಯ್ಯ ಹಾಗೂ ಮನೋಹರ ಗ್ರಂಥಮಾಲಾ ಮಾಲೀಕರಾದ ರಮಾಕಾಂತ ಜೋಶಿ ಅವರಿಗೆ ನುಡಿನಮನ ಸಲ್ಲಿಸಲಾಯಿತು. ಶ್ರದ್ಧಾಂಜಲಿ ಸಭೆಯಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ, ಹಿರಿಯ ಸಾಹಿತಿ ಡಾಕ್ಟರ ವೀರಣ್ಣ ರಾಜೂರ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು.

<><><>

**ವಿಶ್ವ ಲಸಿಕಾ ಸಪ್ತಾಹ ಕಾರ್ಯಕ್ರಮದಂಗವಾಗಿ,** ಮೇ 26 ರಿಂದ 31 ರ ವರೆಗೆ, ನಡೆದ ಲಸಿಕಾ ಅಭಿಯಾನದಲ್ಲಿ ಒಟ್ಟು 494 ಮಕ್ಕಳಿಗೆ ಲಸಿಕೆ ನೀಡಲಾಗಿದೆ ಎಂದು ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾಕ್ಟರ ಸುರೇಂದ್ರ ಬಾಬು ತಿಳಿಸಿದ್ದಾರೆ.

<><><>

**ಚಾಮರಾಜನಗರ ಜಿಲ್ಲೆ,** ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದಲ್ಲಿ, ಕೇಂದ್ರ ಸರ್ಕಾರದ ವಿಕಸಿತ ಕೃಷಿ ಸಂಕಲ್ಪ ರಾಷ್ಟ್ರೀಯ ಅಭಿಯಾನದ ಅಂಗವಾಗಿ, ಹರದನಹಳ್ಳಿ ಹಾಗೂ ಗುಂಡ್ಲುಪೇಟೆಯ ಕೃಷಿ ವಿಜ್ಞಾನ ಕೇಂದ್ರಗಳ ಸಹಯೋಗದಲ್ಲಿ ರೈತರಿಗೆ, ಬೆಳೆಗಳಿಗೆ ಔ ಧಿ ಸಿಂಪಡಣೆ, ಮಣ್ಣು ಹಾಗೂ ನೀರಿನ ಪರೀಕ್ಷೆ ಬಗ್ಗೆ ಪ್ರಾತ್ಯಕ್ಷಿಕೆ ನೀಡಲಾಯಿತು. ಸಸ್ಯರೋಗ ಶಾಸ್ತ್ರದ ವಿಜ್ಞಾನಿ, ಡಾಕ್ಟರ ಪಂಪನಗೌಡ ಅವರು ರೈತರಿಗೆ ಕ್ರಿಮಿನಾಶಕಗಳ ಬಳಕೆ ಹಾಗೂ ಹಟ್ಟಿ ಗೊಬ್ಬರದ ಮೌಲ್ಯವರ್ಧನೆ ಕುರಿತು ಮಾಹಿತಿ ನೀಡಿದರು.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ,** ಕಳೆದ ಜನವರಿಯಿಂದ ಮೇ ಅಂತ್ಯದವರೆಗೆ 43 ಡೆಂಘಿ ಪ್ರಕರಣಗಳು ಪತ್ತೆಯಾಗಿವೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ ಎಚ್.ಆರ್.ತಿಮ್ಮಯ್ಯ ತಿಳಿಸಿದ್ದಾರೆ. ಸಾರ್ವಜನಿಕರು ನಿರ್ಲಕ್ಷ್ಯ ಮಾಡದೆ, ಡೆಂಘಿ ಜ್ವರ ಬಾಧಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದರು.

<><><>

**ಐಪಿಎಲ್ ಟಿ–ಟ್ವೆಂಟಿ ಕ್ರಿಕೆಟ್ ಪಂದ್ಯಾವಳಿಯ,** 18 ನೇ ಆವೃತ್ತಿಯ ಫೈನಲ್ ಪಂದ್ಯ ಗೆದ್ದು, ಪ್ರಶಸ್ತಿ ಜಯಸಿದ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಕೇಂದ್ರ ನವ ಹಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಸೇರಿದಂತೆ ಗಣ್ಯರು ಅಭಿನಂದಿಸಿದ್ದಾರೆ. ಇಂದು ಮಧ್ಯಾಹ್ನ 3 ಗಂಟೆ 30 ನಿಮಿಷಕ್ಕೆ ಬೆಂಗಳೂರು, ವಿಧಾನಸೌಧ ಮುಂಭಾಗದಿಂದ, ಚಿನ್ನಸ್ವಾಮಿ ಕ್ರೀಡಾಂಗಣದವರೆಗೆ ತಂಡದ ವಿಜಯೋತ್ಸವ ಯಾತ್ರೆ ನಡೆಯಲಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>